ಆ) ಕಳೆದ ಎರಡು ವರ್ಷಗಳಲ್ಲಿ ಸೌಲಭ್ಯ ಕೋರಿ ಬಂದಿರುವ ಅರ್ಹ ಅರ್ಜಿಗಳ ವಿವರ ಕೆಳಕಂಡಂತಿದೆ.

ವೃದ್ಧಾಪ್ಯ ವೇತನ	ವಿಧವಾ ವೇತನ	ಅಂಗವಿಕಲ ವೇತನ	ಸಂಧ್ಯಾ ಸುರಕ್ಷಾ ವೇತನ	ಮನಸ್ವಿನಿ	ಮೈತ್ರಿ
200	1498	817	2372	199	4

ಇ) ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಬಾಕಿ ಉಳಿದಿರುವ ಅರ್ಜಿಗಳ ಯೋಜನಾವಾರು ವಿವರ ಕೆಳಕಂಡಂತಿದೆ.

ವೃದ್ಧಾಪ್ಯ ವೇತನ	ವಿಧವಾ ವೇತನ	ಅಂಗವಿಕಲ ವೇತನ	ಸಂಧ್ಯಾ ಸುರಕ್ಷಾ ವೇತನ	ಮನಸ್ವಿನಿ	ಮೈತ್ರಿ
6	293	159	605	101	0

ಈ) ಸಾಮಾಜಿಕ ಭದ್ರತೆ ಯೋಜನೆಗಳಡಿ ಅರ್ಜಿದಾರರಿಗೆ ವಿಳಂಬವಿಲ್ಲದೆ ಸೌಲಭ್ಯ ನೀಡುವ ನಿಟ್ಟಿನಲ್ಲಿ ವೃದ್ಧಾಪ್ಯ ವೇತನ, ಅಂಗವಿಕಲ ವೇತನ, ವಿಧವಾ ವೇತನ ಹಾಗೂ ಸಂಧ್ಯಾ ಸುರಕ್ಷಾ ವೇತನ ಯೋಜನೆಗಳನ್ನು "ಸಕಾಲ" ಸೇವೆಗಳಡಿ ತರಲಾಗಿದ್ದು, ಅರ್ಜಿ ಸಲ್ಲಿಸಿದ 70 ದಿನಗಳೊಳಗಾಗಿ ವಿಲೇವಾರಿ ಮಾಡಲಾಗುತ್ತಿದೆ. ಮನಸ್ವಿನಿ ಹಾಗೂ ಮೈತ್ರಿ ಯೋಜನೆಗಳು ಹೊಸ ಯೋಜನೆಗಳಾದ್ದು ಅರ್ಜಿಗಳ ತ್ವರಿತ ವಿಲೇವಾರಿ ಮಾಡಲಾಗುತ್ತಿದೆ.

ಜಿಲ್ಲಾ ಕ್ರೀಡಾಂಗಣಗಳ ಅಭಿವೃದ್ಧಿ

4114(4457); ಡಾ॥ ಶಿವರಾಜ್ ಪಾಟೀಲ್ ಎಸ್. (ರಾಯಚೂರು ನಗರ)

ಅ) ರಾಜ್ಯದಲ್ಲಿರುವ ಜಿಲ್ಲಾ ಕ್ರೀಡಾಂಗಣಗಳು ಹಾನಿಗೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಕ್ರೀಡಾಂಗಣಗಳ ದುರಸ್ತಿಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು (ಜಿಲ್ಲಾವಾರು ವಿವರ ನೀಡುವುದು);

ಇ) ರಾಯಚೂರು ನಗರದಲ್ಲಿರುವ ಮಹಾತ್ಮಾಗಾಂಧಿ ಕ್ರೀಡಾಂಗಣ ಹಾನಿಗೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಮಹಾತ್ಮಾಗಾಂಧಿ ಕ್ರೀಡಾಂಗಣದ ಅಭಿವೃದ್ಧಿಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು (ಸಂಪೂರ್ಣ ವಿವರ ನೀಡುವುದು);

ಉ) ಇದರ ಅಭಿವೃದ್ಧಿಗಾಗಿ ಸರ್ಕಾರವು ಎಷ್ಟು ಅನುದಾನವನ್ನು ನಿಗಧಿಪಡಿಸಿದೆ (ವಿವರ ನೀಡುವುದು)?

ಶ್ರೀ ಕೆ. ಅಭಯಚಂದ್ರ (ಮಾನ್ಯ ಯುವಜನ ಸೇವಾ ಹಾಗೂ ಮೀನುಗಾರಿಕೆ ಸಚಿವರು)

ಅ) ರಾಜ್ಯದಲ್ಲಿರುವ ಜಿಲ್ಲಾ ಕ್ರೀಡಾಂಗಣಗಳು ಹಾನಿಗೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಹಾವೇರಿ ಜಿಲ್ಲಾ ಕ್ರೀಡಾಂಗಣದಲ್ಲಿರುವ ಬಿದ್ದು ಹೋಗಿರುವ ಒಳಾಂಗಣ ಕ್ರೀಡಾಂಗಣದ ದಕ್ಷಿಣ ಭಾಗದ ಗೋಡೆಯನ್ನು ಪುನರ್ ನಿರ್ಮಿಸುತ್ತಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.

ರಾಯಚೂರು ಜಿಲ್ಲಾ ಕ್ರೀಡಾಂಗಣ ಶಿಥಿಲಗೊಂಡಿದ್ದು, ಹಾಲಿಯಿರುವ ಸೀಟಿಂಗ್ ಗ್ಯಾಲರಿಯನ್ನು ಈಗಿರುವ ಸ್ಥಿತಿಯಲ್ಲಿ ಬಹಿರಂಗ ಹರಾಜು ಮಾಡಲು ಲೋಕೋಪಯೋಗಿ ಇಲಾಖೆಯವರಿಗೆ ಸೂಚಿಸಲಾಗಿದೆ.

ತುಮಕೂರು ಜಿಲ್ಲಾ ಕ್ರೀಡಾಂಗಣದ ಸೋರುವಿಕೆ ತಡೆಗಟ್ಟಲು ಕ್ರಮ ಕೈಗೊಳ್ಳುವ ಸಲುವಾಗಿ ಸ್ಥಳೀಯ ಲೋಕೋಪಯೋಗಿ ಇಲಾಖೆ ರವರಿಗೆ ಅಂದಾಜು ಪಟ್ಟಿ ತಯಾರಿಸಲು ಸೂಚಿಸಲಾಗಿದೆ.

ಇ) ರಾಯಚೂರು ನಗರದಲ್ಲಿರುವ ಮಹಾತ್ಮಾಗಾಂಧಿ ಕ್ರೀಡಾಂಗಣ ಹಾನಿಗೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಈ) ಹಾಲಿಯಿರುವ ಸೀಟಿಂಗ್ ಗ್ಯಾಲರಿಯನ್ನು ಪುನರ್ ನಿರ್ಮಾಣ ಮಾಡಲು ಲೋಕೋಪಯೋಗಿ ಇಲಾಖೆಯವರಿಗೆ ಸೂಚಿಸಲಾಗಿದೆ.

ಉ) ಇದರ ಅಭಿವೃದ್ಧಿಗಾಗಿ ಸರ್ಕಾರವು ಈ ಸಾಲಿನಲ್ಲಿ ಯಾವುದೇ ಅನುದಾನವನ್ನು ನಿಗಧಿಪಡಿಸಿರುವುದಿಲ್ಲ. ಆದರೆ ಜಿಲ್ಲಾ ಕ್ರೀಡಾಂಗಣ ವ್ಯವಸ್ಥಾಪಕ ಸಮಿತಿಯಲ್ಲಿ ಲಭ್ಯವಿರುವ ಅನುದಾನದಲ್ಲಿ ಅಭಿವೃದ್ಧಿ ಪಡಿಸಲು ಕ್ರಮವಹಿಸಲಾಗುವುದು.

ಅಭಿವೃದ್ಧಿ ಕಾಮಗಾರಿಗಳು

4115(4344); ಡಾ॥ ಸುಧಾಕರ್ ಕೆ (ಚಿಕ್ಕಬಳ್ಳಾಪುರ)

ಅ) 2014–15ನೇ ಸಾಲಿನಲ್ಲಿ ಚಿಕ್ಕಬಳ್ಳಾಪುರ ಜಿಲ್ಲಾ ವ್ಯಾಪ್ತಿಯಲ್ಲಿ ಜವಳಿ ಇಲಾಖೆಯಡಿ ಹಮ್ಮಿಕೊಂಡಿರುವ ಅಭಿವೃದ್ಧಿ ವಿವಿಧ ಅಭಿವೃದ್ಧಿ ಯೋಜನೆಗಳು ಯಾವುವು; ಇದರ ಮೊತ್ತ ಎಷ್ಟು (ಅಭಿವೃದ್ಧಿ ಕಾಮಗಾರಿಗಳ ಪ್ರಗತಿಯ ಹಾಗೂ ಮೊತ್ತದ ಕುರಿತಾದ ವಿಧಾನಸಭೆ ಕ್ಷೇತ್ರವಾರು ವಿವರ ನೀಡುವುದು);

ಆ) ಅಭಿವೃದ್ಧಿ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿವೆ, ಯಾವಾಗ ಮುಕ್ತಾಯವಾಗುವುವು;

ಇ) ಈ ಕಾಗಾರಿಗಳ ಗುಣಮಟ್ಟ ವೀಕ್ಷಣೆಗೆ ಮೂರನೇ ಪ್ರತಿನಿಧಿಯ (ಥರ್ಡ್ ಪಾರ್ಟಿ) ವೀಕ್ಷಣೆ ಆಗಿದೆಯೇ; ಹಾಗಿದ್ದಲ್ಲಿ ಅವರ ವಿವರ ನೀಡುವುದು;

ಈ) ಗುಣಮಟ್ಟದ ಕಾಗಾರಿಗೆ ಯಾವ ಮಾದರಿಯ ಕ್ರಮ ಕೈಗೊಳ್ಳಲಾಗಿದೆ, ಗುತ್ತಿಗೆ ನೀಡುವ ಕಾರ್ಯದಲ್ಲಿ ಯಾವ ಮಾನದಂಡವನ್ನು ಅನುಸರಿಸಲಾಗಿದೆ;

ಉ) ಗುತ್ತಿಗೆದಾರರು ಸಮಯಕ್ಕೆ ಸರಿಯಾಗಿ ಕೆಲಸ ಪೂರೈಸದಿದ್ದರೆ ಕಳಪೆ ಕಾಮಗಾರಿ ಕೈಗೊಂಡಿದ್ದರೆ ಅಂತವರ ವಿರುದ್ದ ಸರ್ಕಾರವು ಯಾವ ಕ್ರಮಕೈಗೊಳ್ಳಲಾಗುವುದು.